ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಒಟ್ಟು ಪ್ರಶ್ನೆಗಳು – ೪೪**

**ಪಟ್ಟಿ – ೧೬**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೈದನೇ ಅಧಿವೇಶನ

**ಸೋಮವಾರ, ದಿನಾಂಕ : ೧೪ನೇ ಜುಲೈ, ೨೦೧೪**

---

## ಸಮೂಹ – I

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

## "ಪ್ರಧಾನಮಂತ್ರಿ ಹದಿನೈದು ಅಂಶಗಳ ಕಾರ್ಯಕ್ರಮ"

**ಶ್ರೀ ಸೈಯದ್ ಮುಧೀರ್ ಆಗಾ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೦೦೫ (೧೧೩೯) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸ್ತುತ ಸರ್ಕಾರವು ಅಧಿಕಾರ ವಹಿಸಿಕೊಂಡ ನಂತರ "ಪ್ರಧಾನ ಮಂತ್ರಿ ಹದಿನೈದು ಅಂಶಗಳ ಕಾರ್ಯಕ್ರಮ"ಕ್ಕೆ ಸಂಬಂಧಿಸಿದಂತೆ ಇಲ್ಲಿಯವರೆಗೆ ಎಷ್ಟು ರಾಜ್ಯ ಮಟ್ಟದ ಹಾಗೂ ಜಿಲ್ಲಾ ಮಟ್ಟದ ಸಭೆಗಳನ್ನು ನಡೆಸಿವೆ ;

(ಆ) ಅವುಗಳಲ್ಲಿ ಆದ ಚರ್ಚೆ ಅಥವಾ ನಿರ್ಣಯಗಳೇನು (ಜಿಲ್ಲಾವಾರು ವಿವರ ನೀಡುವುದು) ;

(ಇ) ಜಿಲ್ಲಾ ಮಟ್ಟದಲ್ಲಿ ಸಭೆ ನಡೆಸದಿರುವ ಜಿಲ್ಲಾಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಸದರಿ ಕಾರ್ಯಕ್ರಮದಲ್ಲಿ ಅಲ್ಪ ಸಂಖ್ಯಾತರಿಗೆಂದು ಮೀಸಲಿರುವ ಶೇ.೧೫ ರಷ್ಟು ಅನುದಾನವು ಅಲ್ಪಸಂಖ್ಯಾತರ ಅಭಿವೃದ್ಧಿಗೆ ಬಿಡುಗಡೆ ಮಾಡಲಾಗಿದೆಯೇ (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಉ) ಸದರಿ ಕಾರ್ಯಕ್ರಮ ಅನುಷ್ಠಾನವಾಗುತ್ತಿದೆಯೇ ಅಥವಾ ಕೇವಲ ಜಾಹಿರಾತಿಗಾಗಿ ಬಳಸಿಕೊಳ್ಳಲಾಗುತ್ತಿದೆಯೇ ?

## ಗಂಗಾ ಕಲ್ಯಾಣ ಯೋಜನೆ

**ಶ್ರೀ ವೀರಕುಮಾರ್ ಅಪ್ಪಾಸೋ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೦೦೬ (೧೨೬೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಾ॥ ಬಿ.ಆರ್. ಅಂಬೇಡ್ಕರ್ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭಿವೃದ್ಧಿ ನಿಗಮದ ವತಿಯಿಂದ ಗಂಗಾ ಕಲ್ಯಾಣ ಯೋಜನೆ ಅಡಿಯಲ್ಲಿ ಬೆಳಗಾಂ ಜಿಲ್ಲೆಯಲ್ಲಿ ೨೦೧೩–೧೪ನೇ ಸಾಲಿನ ಆರ್ಥಿಕ ಮತ್ತು ಭೌತಿಕ ಗುರಿ ಏನು ;

(ಆ) ಎಷ್ಟು ಮಂದಿ ಫಲಾನುಭವಿಗಳಿಗೆ ಕೊಳವೆ ಬಾವಿ ಮಂಜೂರಾಗಿದೆ ಮತ್ತು ಎಷ್ಟು ಕೊರೆಯಲಾಗಿದೆ ; ಇದರಲ್ಲಿ ಯಶಸ್ವಿಯಾದ ಕೊಳವೆ ಬಾವಿಗಳೆಷ್ಟು ;

(ಇ) ಯಶಸ್ವಿಯಾದ ಎಷ್ಟು ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಮತ್ತು ಯಂತ್ರ ಅಳವಡಿಸಲಾಗಿದೆ ;

(ಈ) ಉಳಿದ ಕೊಳವೆ ಬಾವಿಗಳನ್ನು ಕೊರೆಯದಿರಲು ಕಾರಣವೇನು ?

## ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರ ಹುದ್ದೆಗೆ ಶುಶ್ರೂಷಕಿಯರ ನೇಮಕ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೦೦೭ (೧೩೦೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೦೫ನೇ ಇಸವಿಗಿಂತ ಮೊದಲು ಶುಶ್ರೂಷಕ ಹುದ್ದೆಯ ವಿದ್ಯಾರ್ಹತೆಯನ್ನು ಹೊಂದಿದ್ದು ರಾಜ್ಯ ಬೇರೆ ಬೇರೆ ಸ್ಥಳಗಳಲ್ಲಿ ಇಲಾಖೆಯಲ್ಲಿ (ರಾಜ್ಯ ವಲಯ) ಖಾಲಿ ಇರುವ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರ ಹುದ್ದೆಗೆ ಗುತ್ತಿಗೆ ಆಧಾರದಲ್ಲಿ ನೇಮಕಗೊಂಡು ಪ್ರಸ್ತುತ ಶುಶ್ರೂಷಕಿಯರಾಗಿ ರಾಜ್ಯದಾದ್ಯಂತ ಎಷ್ಟು ಮಂದಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು) ;

(ಆ) ಸದರಿ ಶುಶ್ರೂಷಕಿಯರು ಪ್ರಸ್ತುತ ಪಡೆಯುತ್ತಿರುವ ಮಾಸಿಕ ವೇತನ ಎಷ್ಟು ;

(ಇ) ಪ್ರಸ್ತುತ ಅವರುಗಳಿಗೆ ಯಾವ ಲೆಕ್ಕ ಶೀರ್ಷಿಕೆಯಡಿಯಲ್ಲಿ ವೇತನ ನೀಡಲಾಗುತ್ತಿದೆ (ಅದರ ಸಂಪೂರ್ಣ ವಿವರಗಳನ್ನು ನೀಡುವುದು) ;

(ಈ) ಈ ಹಿಂದೆ ೨೦೦೭ನೇ ಇಸವಿಯಲ್ಲಿ ಇಲಾಖೆಯಲ್ಲಿ ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ದಂತ ವೈದ್ಯರಿಗೆ ಮತ್ತು ೨೦೧೩ನೇ ಇಸವಿಯಲ್ಲಿ ಕಿರಿಯ ಪ್ರಯೋಗ ಶಾಲಾ ತಂತ್ರಜ್ಞರಿಗೆ ಕನಿಷ್ಠ ಮೂಲ ವೇತನ ನಿಗದಿಪಡಿಸಲು ಅನುಸರಿಸಿದ ಮಾನ ದಂಡದಂತೆ, ಈ ಶುಶ್ರೂಷಕಿಯರಿಗೂ ಕನಿಷ್ಠ ಮೂಲ ವೇತನವನ್ನು ಯಾವಾಗ ನಿಗದಿಪಡಿಸಿ ಆದೇಶ ನೀಡಲಾಗುವುದು (ಸಂಪೂರ್ಣ ವಿವರ ನೀಡುವುದು) ?

## ಆಹಾರ ಸುರಕ್ಷತಾ ಅಧಿಕಾರಿಗಳ ನೇಮಕ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೦೦೮ (೧೨೬೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆರೋಗ್ಯ ಇಲಾಖೆಯಲ್ಲಿನ ಆಹಾರ ಮತ್ತು ಸುರಕ್ಷತಾ ಗುಣಮಟ್ಟ ಕಾಯಿದೆಯನ್ವಯ ಎಷ್ಟು ಹುದ್ದೆಗಳು/ಯಾವ ಹುದ್ದೆಗಳು ಎಷ್ಟು ಸಮಯದಿಂದ ಖಾಲಿ ಇರುತ್ತವೆ ;

(ಆ) ಖಾಲಿ ಇರುವ ಆಹಾರ ಸುರಕ್ಷತಾ ಅಧಿಕಾರಿಗಳ ಹುದ್ದೆಗೆ ಎಂ.ಎಸ್.ಸಿ. ಪದವಿಯನ್ನು ಹೊಂದಿರುವ ಯಾರು ಯಾರು ಆರೋಗ್ಯ ಸಹಾಯಕರು ಅರ್ಜಿ ಸಲ್ಲಿಸಿರುತ್ತಾರೆ ;

(ಇ) ಇವರುಗಳನ್ನು ಯಾವಾಗ ನೇಮಕ ಮಾಡಿಕೊಳ್ಳಲಾಗುವುದು ?

## ಜಾತಿ ಜನಗಣತಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೦೦೯ (೮೮೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರ ಹಿಂದುಳಿದ ವರ್ಗಗಳ ಜಾತಿ ಜನಗಣತಿ ಮಾಡುತ್ತಿರುವುದು ನಿಜವೇ ;

(ಆ) ಜಾತಿ ಜನಗಣತಿಗೆ ಇರುವ ಮಾನದಂಡವೇನು ;

(ಇ) ಅದು ಈಗ ಯಾವ ಹಂತದಲ್ಲಿದೆ ;

(ಈ) ಈ ಕಾರ್ಯವನ್ನು ಯಾವ ಸಮಯದಲ್ಲಿ ಪೂರ್ಣಗೊಳಿಸಲಾಗುವುದು ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು (ವಿವರ ನೀಡುವುದು) ?

## ಹಿಂದುಳಿದ ವರ್ಗಗಳಿಗೆ ಸಹಕಾರಿ ಕ್ಷೇತ್ರದಲ್ಲಿ ಮೀಸಲಾತಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೦೧೦ (೮೮೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಿಂದುಳಿದ ವರ್ಗಗಳಿಗೆ ಸಹಕಾರಿ ಕ್ಷೇತ್ರದಲ್ಲಿ ಯಾವ ರೀತಿ ಮೀಸಲಾತಿ ನೀಡಲಾಗಿದೆ ;

(ಆ) ಪ್ರತಿ ಸಹಕಾರಿ ಸಂಘದಲ್ಲಿ ಹಿಂದುಳಿದ ವರ್ಗಗಳಿಗೆ ಎರಡು ಮೀಸಲಾತಿಗಳನ್ನು ನಿಗದಿಪಡಿಸಿ ಹಿಂದಿನ ಸರ್ಕಾರ ಆದೇಶಿಸಿದ್ದು ನಿಜವೇ ;

(ಇ) ಸದರಿ ಆದೇಶ ಅನುಷ್ಠಾನದಲ್ಲಿ ಆಗುವ ತೊಂದರೆಯೇನು ;

(ಈ) ಸದರಿ ಸಮಸ್ಯೆ ಬಗೆಹರಿಸಲು ಸರ್ಕಾರದ ನಿಲುವೇನು (ಪೂರ್ಣ ವಿವರ ನೀಡುವುದು) ?

## ಅಜ್ಜರ ಕಾಡು ಸರ್ಕಾರಿ ಆಸ್ಪತ್ರೆಯನ್ನು ಜಿಲ್ಲಾ ಆಸ್ಪತ್ರೆಯಾಗಿ ಘೋಷಣೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೦೧೧ (೮೮೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉಡುಪಿ ಅಜ್ಜರ ಕಾಡು ಸರ್ಕಾರಿ ಆಸ್ಪತ್ರೆ ಜಿಲ್ಲಾಸ್ಪತ್ರೆಯಾಗಿ ಘೋಷಣೆಯಾಗದಿರುವುದು ನಿಜವೇ ;

(ಆ) ಸದರಿ ಆಸ್ಪತ್ರೆಯಲ್ಲಿ ಜಿಲ್ಲಾಸ್ಪತ್ರೆಯ ಎಲ್ಲಾ ಸೌಲಭ್ಯಗಳು ಲಭ್ಯವಿವೆಯೇ ;

(ಇ) ಜಿಲ್ಲಾಸ್ಪತ್ರೆಗೆ ಇರಬಹುದಾದ ಸವಲತ್ತುಗಳ ಮಾನದಂಡವೇನು (ಪೂರ್ಣ ವಿವರ ನೀಡುವುದು) ;

(ಈ) ಉಡುಪಿ ಸರ್ಕಾರಿ ಆಸ್ಪತ್ರೆಯನ್ನು ಜಿಲ್ಲಾಸ್ಪತ್ರೆಯಾಗಿ ಎಂದು ಘೋಷಿಸಲಾಗುವುದು ;

(ಉ) ಈ ಬಗ್ಗೆ ಕೈಗೊಂಡ ಕ್ರಮವೇನು (ವಿವರ ನೀಡುವುದು) ?

## ವಾಯುವ್ಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ನಿವೃತ್ತಿ ನೌಕರರಿಗೆ ನಿವೃತ್ತಿ ವೇತನ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೦೧೨ (೧೨೬೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾರವಾರ ಜಿಲ್ಲೆಯಲ್ಲಿ ವಾಯುವ್ಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ದುಡಿದು ನಿವೃತ್ತಿ ಹೊಂದಿದ ನೌಕರರಿಗೆ ನಿವೃತ್ತಿ ವೇತನ ಮತ್ತು ಇತರೆ ಅನೇಕ ಸೌಲಭ್ಯಗಳನ್ನು ಸರಿಯಾಗಿ ನೀಡದೆ ಇರುವುದು ಸರಕಾರದ ಗಮನಕ್ಕೆ ಬಂದಿರುತ್ತದೆಯೇ ;

(ಆ) ಈ ರೀತಿ ಎಷ್ಟು ನೌಕರರಿಗೆ ಈ ಸೌಲಭ್ಯ ದೊರೆತಿರುವುದಿಲ್ಲ ;

(ಇ) ಸೌಲಭ್ಯ ದೊರೆಯದೇ ಇದ್ದಲ್ಲಿ, ಸದರಿ ನೌಕರರಿಗೆ ಎಷ್ಟು ದಿನಗಳಲ್ಲಿ ನಿವೃತ್ತಿ ಸೌಲಭ್ಯಗಳನ್ನು ಒದಗಿಸಲಾಗುವುದು (ವಿವರ ನೀಡುವುದು) ?

## ಹೊಳವನಹಳ್ಳಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರ

**ಶ್ರೀ ಎಂ.ಡಿ. ಲಕ್ಷ್ಮಿನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೦೧೩ (೧೨೯೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆ, ಕೊರಟಗೆರೆ ತಾಲ್ಲೂಕು ಹೊಳವನಹಳ್ಳಿ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಎಷ್ಟು ಮಂದಿ ವೈದ್ಯರಿದ್ದಾರೆ ; ಅವರುಗಳ ಹೆಸರು ಹಾಗೂ ಇತರ ಸಿಬ್ಬಂದಿ ಹೆಸರುಗಳನ್ನು ತಿಳಿಸುವುದು ;

(ಇ) ಹೊಳವನಹಳ್ಳಿ ಗ್ರಾಮವು ದೊಡ್ಡ ಹೋಬಳಿ ಕೇಂದ್ರವಾಗಿದ್ದು, ಇಲ್ಲಿ ಕೂಲಿ ಕಾರ್ಮಿಕರೇ ಹೆಚ್ಚಿನ ಸಂಖ್ಯೆಯಲ್ಲಿದ್ದು, ಸರಿಯಾದ ಚಿಕಿತ್ಸೆ ಸಿಗುವುದಿಲ್ಲವೆಂದು ಜನರು ಹಲವಾರು ಬಾರಿ ದೂರನ್ನು ನೀಡಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಈ) ವೈದ್ಯರುಗಳು ಪ್ರತಿದಿನ ಸಕಾಲಕ್ಕೆ ಆಗಮಿಸುತ್ತಿಲ್ಲವೆಂದು ಜನರು ತಮ್ಮ ದೂರಿನಲ್ಲಿ ತಿಳಿಸಿರುತ್ತಾರೆ ; ಸದರಿ ವೈದ್ಯರುಗಳು ಆ ಗ್ರಾಮದಲ್ಲಿ ವಾಸ ಮಾಡದೆ ಬೇರೆ ಬೇರೆ ಊರಿನಿಂದ ಪ್ರಯಾಣ ಮಾಡುತ್ತಿದ್ದಾರೆ ; ಕೂಡಲೇ ವೈದ್ಯರು/ಸಿಬ್ಬಂದಿ ವರ್ಗದವರು ಕಾರ್ಯ ನಿರ್ವಹಿಸುತ್ತಿರುವ ಸ್ಥಳದಲ್ಲೇ ನೆಲಸುವಂತೆ ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಗುಜರಾತ್ ಮಾದರಿ ರಾಜ್ಯ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :-**

೧೦೧೪ (೯೪೦) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗುಜರಾತ್ ರಾಜ್ಯಕ್ಕೆ ಹೋಲಿಕೆ ಮಾಡಿದರೆ, ಕರ್ನಾಟಕ ರಾಜ್ಯ ಯಾವ ಯಾವ ರಂಗ/ವಲಯ/ಕ್ಷೇತ್ರಗಳಲ್ಲಿ ಹೆಚ್ಚು ಸಾಧನೆಗೈದಿದೆ ಮತ್ತು ಹಿಂದುಳಿದಿದೆ (ನೀಡುವ ವರದಿ ಆಧಾರ ತಿಳಿಸುವುದು) ;

(ಆ) ರಾಷ್ಟಮಟ್ಟದಲ್ಲಿ, ರಾಜ್ಯವು ಎಷ್ಟನೇ ಸ್ಥಾನಗಳಲ್ಲಿದೆ ; (ರಂಗ, ವಲಯ, ಕ್ಷೇತ್ರಗಳವಾರು ವಿವರ ನೀಡುವುದು) ?

**ಡಾ॥ ಅಂಬೇಡ್ಕರ್ ನಿಗಮದಲ್ಲಿನ ಸ್ಥಿರ ಮತ್ತು ಫೋನ್‌ಗಳು**

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೧೦೧೫ (೧೨೭೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಾ॥ ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಕಛೇರಿ ಮತ್ತು ಅಧಿಕಾರಿಗಳ ನಿವಾಸ ಸೇರಿದಂತೆ ಇರುವ ಒಟ್ಟು ಸ್ಥಿರ ದೂರವಾಣಿ ಮತ್ತು ಸೆಲ್ ಫೋನ್‌ಗಳೆಷ್ಟು ; ಇವುಗಳಿಗೆ ಎಷ್ಟೆಷ್ಟು ದರವನ್ನು ಪಾವತಿ ಮಾಡಲಾಗುತ್ತಿದೆ (ವಿವರ ನೀಡುವುದು) ;

(ಆ) ಸದರಿ ನಿಗಮದಲ್ಲಿ ಕಳೆದ ೧೦ ವರ್ಷಗಳಲ್ಲಿ ಯಾವ್ಯಾವ ಸಚಿವರು, ಅಧ್ಯಕ್ಷರು ಮತ್ತು ಅಧಿಕಾರಿ/ನೌಕರರಿಗೆ ಸೆಲ್ ಫೋನ್ ಖರೀದಿಸಲಾಗಿದೆ ; ಸೆಲ್ ಫೋನ್‌ಗಳನ್ನು ನಿಗಮದಿಂದ ಖರೀದಿಸಿ ಕೊಡಲು ಸರ್ಕಾರದ ಆದೇಶವಿದೆಯೇ ; ಇದ್ದಲ್ಲಿ ಪ್ರತಿ ಲಗತ್ತಿಸುವುದು ; ಇಲ್ಲದಿದ್ದಲ್ಲಿ, ಯಾವ ಆಧಾರದ ಮೇಲೆ ಸರ್ಕಾರದ ಹಣವನ್ನು ಸೆಲ್ ಫೋನ್‌ಗಳ ಖರೀದಿಗೆ ವ್ಯಯ ಮಾಡಲಾಗಿದೆ ; ಸೆಲ್ ಫೋನ್‌ಗಳ ಮಾದರಿಯ ವಿವರ ಮತ್ತು ದರ ಹಾಗೂ ಯಾವ ಯಾವ ನೌಕರರು/ಅಧಿಕಾರಿಗಳಿಗೆ ಖರೀದಿಸಲು ಖರ್ಚಾದ ಒಟ್ಟು ಮೊತ್ತವನ್ನು ತಿಳಿಸುವುದು ;

(ಇ) ಸೆಲ್ ಫೋನ್‌ಗಳು ಮಾತ್ರವಲ್ಲದೇ ಡಾಟಾ ಕಾರ್ಡ್ ಖರೀದಿಸಲಾಗಿದೆಯೇ ; ಇದ್ದಲ್ಲಿ ಇದರ ಅವಶ್ಯಕತೆ ಇದೆಯೆ ಮತ್ತು ಅಗತ್ಯತೆ ಬಗ್ಗೆ ವಿವರ ನೀಡುವುದು ; ಇಲ್ಲವಾದಲ್ಲಿ, ಖರೀದಿಸಲು

ಕಾರಣವೇನು ; ಖರೀದಿಸಲು ಕಾರಣರಾದವರ ವಿರುದ್ಧ ಕೈಗೊಂಡ ಕ್ರಮಗಳೇನು ;

(ಈ) ಅವರ ಅಧಿಕಾರವಧಿ/ಸೇವಾವಧಿ ಮುಕ್ತಾಗೊಂಡ ನಂತರ ಸೆಲ್ ಫೋನ್‌ಗಳನ್ನು ವಾಪಸ್ಸು ಪಡೆಯಲಾಗಿದೆಯೇ ; ವಾಪಸ್ಸು ಪಡೆದಿದ್ದಲ್ಲಿ ಅವುಗಳ ವಿವರ ನೀಡುವುದು ; ವಾಪಸ್ಸು ಪಡೆಯದಿದ್ದಲ್ಲಿ ಯಾವ ಕಾರಣ ಅಥವಾ ಉದ್ದೇಶಕ್ಕಾಗಿ ವಾಪಸ್ಸು ಪಡೆದಿಲ್ಲವೆಂಬ ಬಗ್ಗೆ ಸಕಾರಣ ನೀಡುವುದು ;

(ಉ) ಈ ರೀತಿ ಖರೀದಿಸಿದ ಸೆಲ್ ಫೋನ್‌ಗಳಿಗೆ ಯಾರ್ಯಾರಿಗೆ ಎಷ್ಟೆಷ್ಟು ಕರೆನ್ಸಿ ಹಣವನ್ನು ಪಾವತಿಸಬಹುದಾಗಿದೆ ; ಇದಕ್ಕೆ ಸರ್ಕಾರದ ಆದೇಶವಿದೆಯೆ ; ಇದ್ದಲ್ಲಿ ಪ್ರತಿ ಲಗತ್ತಿಸುವುದು ; ಇಲ್ಲದಿದ್ದಲ್ಲಿ, ಯಾವ ಆಧಾರದಲ್ಲಿ ಕರೆನ್ಸಿಗೆ ಹಣ ಪಾವತಿಸಲಾಗುತ್ತಿದೆ ; ಈ ರೀತಿ ವೃಥಾ ಸರ್ಕಾರದ ಹಣ ಪೋಲಾಗುವಿಕೆಯಿಂದ ಪರಿಶಿಷ್ಟ ಜಾತಿಯ ಕಡುಬಡವ ಫಲಾನುಭವಿಗಳಿಗೆ ಅನ್ಯಾಯ ವಾದಂತಾಗುವುದಿಲ್ಲವೆ (ವಿವರಗಳನ್ನು ತಿಳಿಸುವುದು) ?

**ಜೇನು ಕುರುಬರ ಹಾಡಿಗಳಲ್ಲಿ ಮನೆ ನಿರ್ಮಾಣ**

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜು) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೦೧೬ (೧೨೯೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆ, ಹುಣಸೂರು ತಾಲ್ಲೂಕು, ಹನಗೋಡು ಹೋಬಳಿಯಲ್ಲಿ ಜೇನು ಕುರುಬರು ವಾಸಿಸುವ ಹಾಡಿಗಳ ಸಂಖ್ಯೆ ಎಷ್ಟು ; ಅವು ಯಾವುವು ;

V3376-3

(ಆ) ಈ ಹಾಡಿಗಳ ನಿವಾಸಿಗಳಿಗೆ ವಿಶೇಷ ಘಟಕ ಯೋಜನೆ ಅನ್ವಯ ಮಂಜೂರಾಗಿದ್ದ ಮನೆಗಳ ಸಂಖ್ಯೆ ಎಷ್ಟು ; ಇದರಲ್ಲಿ ಕೇಂದ್ರದ ಪಾಲೆಷ್ಟು ; ರಾಜ್ಯದ ಪಾಲೆಷ್ಟು ; ಎಷ್ಟು ಹಣ ನಿಗದಿಪಡಿಸಿದೆ ; ಯಾವ ಸಾಲಿನಲ್ಲಿ ಇದು ಮಂಜೂರಾಗಿದೆ ;

(ಇ) ಇದುವರೆಗೆ ಎಷ್ಟು ಮನೆಗಳನ್ನು ನಿರ್ಮಿಸಲಾಗಿದೆ ; ನಿರ್ಮಾಣ ಹಂತದಲ್ಲಿರುವ ಮನೆಗಳ ಸಂಖ್ಯೆ ಎಷ್ಟು ; ಇನ್ನು ಪ್ರಾರಂಭ ಆಗಬೇಕಾದ ಮನೆಗಳ ಸಂಖ್ಯೆ ಎಷ್ಟು ; ಈ ಮನೆಗಳನ್ನು ಯಾವಾಗ ಪೂರ್ಣಗೊಳಿಸಿ ಫಲಾನುಭವಿಗಳಿಗೆ ಹಸ್ತಾಂತರಿಸ ಲಾಗುವುದು ?

## ಗಿರಿಜನ ಕಾಲೋನಿಯಲ್ಲಿ ಮೂಲ ಸೌಲಭ್ಯಗಳ ಕೊರತೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೦೧೭ (೧೨೯೩) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಾಗರಹೊಳೆ ಅಭಯಾರಣ್ಯ ಪ್ರದೇಶದಿಂದ ಸ್ಥಳಾಂತರಿಸಿ ಹುಣಸೂರು ತಾಲ್ಲೂಕು, ನಾಗಪುರ ಗಿರಿಜನ ಪುನರ್ವಸತಿ ಕೇಂದ್ರದಲ್ಲಿ ಎಷ್ಟು ಗಿರಿಜನ ಕುಟುಂಬಗಳಿಗೆ ಮನೆಗಳನ್ನು ನಿರ್ಮಿಸಿ ಕೊಡಲಾಗಿದೆ (ಈ ಯೋಜನೆಯ ಪೂರ್ಣ ವಿವರ ಒದಗಿಸುವುದು) ;

(ಆ) ಈ ಮನೆಗಳು ಬಹಳ ಚಿಕ್ಕದಾಗಿದ್ದು, ವಾಸಿಸಲು ಯೋಗ್ಯವಾಗಿಲ್ಲದೆ ಮೂಲಭೂತ ಸೌಲಭ್ಯಗಳ ಕೊರತೆಯಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಕುಟುಂಬಗಳಿಗೆ ಭೂ ಒಡೆತನದ ಹಕ್ಕು ಪತ್ರ ನೀಡಲಾಗಿದೆಯೇ ನೀಡಿದ್ದಲ್ಲಿ ಎಷ್ಟು ಕುಟುಂಬಗಳಿಗೆ ನೀಡಲಾಗಿದೆ; ಇನ್ನೂ ನೀಡಬೇಕಾದ ಕುಟುಂಬಗಳ ಸಂಖ್ಯೆ ಎಷ್ಟು ?

## ಸಾಲಿಗ್ರಾಮ ಸಮುದಾಯ ಆರೋಗ್ಯ ಕೇಂದ್ರದ ತುರ್ತು ವಾಹನ ದುರಸ್ಥಿ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೦೧೮ (೧೨೭೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಜಿಲ್ಲೆ, ಕೆ.ಆರ್. ನಗರ ತಾಲ್ಲೂಕು, ಸಾಲಿಗ್ರಾಮ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದ ಆಂಬುಲೆನ್ಸ್ ವಾಹನ ೧೫ ವರ್ಷ ಹಳೆಯದಾಗಿದ್ದು, ದಾರಿಯಲ್ಲೆ ಕೆಟ್ಟು ನಿಲ್ಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹೊಸ ಆಂಬುಲೆನ್ಸ್ ವಾಹನ ಒದಗಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಆ) ಇಲ್ಲಿರುವ ೧೦೮-ವಾಹನ ಕೆಟ್ಟು ನಿಂತು ಎರಡು ತಿಂಗಳಾಗಿದ್ದು, ದುರಸ್ಥಿ ಮಾಡಿಸಲು ತಕ್ಷಣ ಕ್ರಮ ವಹಿಸಲಾಗುವುದೇ ;

(ಇ) ಹನಸೋಗೆ ಆರೋಗ್ಯ ಕೇಂದ್ರದ ತುರ್ತು ವಾಹನವೂ(೧೦೮) ಕೆಟ್ಟು ನಿಂತಿದ್ದು, ಇದರ ದುರಸ್ಥಿಗೆ ಕ್ರಮ ತೆಗೆದುಕೊಳ್ಳಲಾಗುವುದೇ ;

(ಈ) ಸಾಲಿಗ್ರಾಮ ಸಮುದಾಯ ಆರೋಗ್ಯ ಕೇಂದ್ರಕ್ಕೆ ಪ್ರತಿದಿನ ೪೦೦ಕ್ಕೂ ಹೆಚ್ಚು ರೋಗಿಗಳು, ಗಂಧನಹಳ್ಳಿ ಮೇಲೂರು, ಹರದನಹಳ್ಳಿ, ಮುಂಡೂರು, ಪ್ರಾಥಮಿಕ ಆರೋಗ್ಯ ಕೇಂದ್ರಗಳಿಂದ ಹೆಚ್ಚಿನ ಚಿಕಿತ್ಸೆಗೆ ಬರುತ್ತಿದ್ದು, ತುರ್ತು ವಾಹನ ಆಂಬುಲೆನ್ಸ್ ಇಲ್ಲದೆ ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಈ ಬಗ್ಗೆ ತಕ್ಷಣ ಕ್ರಮ ತೆಗೆದುಕೊಳ್ಳಲಾಗುವುದೇ ?

## ಬಿ.ಪಿ.ಎಲ್ ಕಾರ್ಡುದಾರರು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೦೧೯ (೧೨೭೩) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿ ಇದುವರೆಗೆ ಒಟ್ಟು ಎಷ್ಟು ಬಿ.ಪಿ.ಎಲ್ ಕಾರ್ಡ್ ವಿತರಿಸಲಾಗಿದೆ; ಇನ್ನೂ ಎಷ್ಟು ವಿತರಿಸಲು ಬಾಕಿ ಇದೆ ;

(ಆ) ಹಾಲಿ ಇರುವ ಬಿ.ಪಿ.ಎಲ್ ಕಾರ್ಡುದಾರರಲ್ಲಿ ಎಷ್ಟು ಬೋಗಸ್ ಕಾರ್ಡುಗಳನ್ನು ಪತ್ತೆಹಚ್ಚಲಾಗಿದೆ ; ಎಷ್ಟು ಅನರ್ಹರಿಗೆ ಬಿ.ಪಿ.ಎಲ್. ಕಾರ್ಡ್ ವಿತರಿಸಲಾಗಿರುವ ಪ್ರಕರಣ ಬೆಳಕಿಗೆ ಬಂದಿದೇ ; ಇದಕ್ಕೆ ಹೊಣೆಯಾದವರ ಮೇಲೆ ಕೈಗೊಂಡ ಕ್ರಮವೇನು ?

## ಹೊಸ ಬಸ್ಸುಗಳ ಸೌಕರ್ಯ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೦೨೦ (೧೨೭೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿ ಯಾವ ಯಾವ ಹಳ್ಳಿಗೆ ಈ ವರ್ಷ ಹೊಸ ಬಸ್ ಸೌಕರ್ಯ ಕಲ್ಪಿಸಲು ಯೋಚಿಸಲಾಗಿದೆ ;

(ಆ) ಪ್ರತಿ ವರ್ಷ ತಲಾ ಹತ್ತು ಹಳ್ಳಿಗೆ ಹೊಸ ಬಸ್ ಸೌಕರ್ಯ ಕಲ್ಪಿಸಲು ಯೋಜನೆ ರೂಪಿಸಿ ಹಾವೇರಿ ಜಿಲ್ಲೆಯನ್ನು "ಬಸ್ ಸೌಕರ್ಯ ಇಲ್ಲದ ಹಳ್ಳಿ ಇಲ್ಲ" ಎಂದು ಘೋಷಿಸಲಾಗುವುದೇ ?

## ವಸತಿ ನಿಲಯಗಳಿಗೆ ಎಸ್.ಟಿ.ಎಂ.ಸಿ ಯಂತೆ ಸಮಿತಿ ರಚನೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೦೨೧ (೧೨೭೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಸರಿಯಾದ ಸಮಯಕ್ಕೆ ಉತ್ತಮವಾದ ಆಹಾರವನ್ನು ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ವಸತಿ ನಿಲಯಗಳಿಗೆ ಸರ್ಕಾರಿ ಶಾಲೆಗಳಲ್ಲಿ ರಚಿಸಿರುವಂತೆ, ಎಸ್.ಟಿ.ಎಂ.ಸಿ. ಸಮಿತಿಯನ್ನು ರಚಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು (ಪೂರ್ಣ ಮಾಹಿತಿ ನೀಡುವುದು) ?

## ಆಹಾರ ನಿಗಮದ ಉಗ್ರಾಣಗಳು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೦೨೨ (೧೩೧೪) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಹಾರ ನಿಗಮದ ಎಷ್ಟು ಉಗ್ರಾಣಗಳಿವೆ (ಹೆಸರು, ವಿಳಾಸಗಳ ಪಟ್ಟಿ ನೀಡುವುದು) ;

(ಆ) ಪ್ರತಿ ಉಗ್ರಾಣಗಳಲ್ಲಿ ಸರಕುಗಳ ಆಗಮನ/ನಿರ್ಗಮನ ದಾಖಲು ಮಾಡುವ/ಮೇಲುಸ್ತುವಾರಿಯ ವ್ಯವಸ್ಥೆಗಳೇನು ;

(ಇ) ಉಗ್ರಾಣಗಳಿಂದ ವಿತರಣೆಯ ಡಿಪೋಗಳಿಗೆ ಸರಕುಗಳ ಸಾಗಣಿಕೆ ಮತ್ತು ಮೇಲುಸ್ತುವಾರಿ ವ್ಯವಸ್ಥೆಗಳೇನು ;

(ಈ) ಮೇಲಿನ ವ್ಯವಸ್ಥೆಗಳಲ್ಲಿ, ದುರುಪಯೋಗ/ವಂಚನೆ ಪ್ರಕರಣಗಳನ್ನು ಪತ್ತೆ ಹಚ್ಚುವ ವ್ಯವಸ್ಥೆಯಿದೆಯೇ ;

(ಉ) ಈ ವ್ಯವಸ್ಥೆಗಳಿಂದ ಅಥವಾ ಆಡಿಟ್‌ನಿಂದ ಅಥವಾ ಮತ್ಯಾವುದಾದರೂ ಮಾರ್ಗಗಳಿಂದ ದುರುಪಯೋಗ ಪ್ರಕರಣಗಳು ಬೆಳಕಿಗೆ ಬಂದಿವೆಯೇ ;

(ಊ) ಬಂದಿದ್ದಲ್ಲಿ, ಪ್ರತಿ ಪ್ರಕರಣಗಳ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

## ಹಾವು ಕಚ್ಚಿದವರಿಗೆ ಔಷಧಿ ದಾಸ್ತಾನು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೦೨೩ (೧೨೭೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಗ್ರಾಮೀಣ ಪ್ರದೇಶದ ಹೊಲಗದ್ದೆಗಳ ಕೆಲಸ ಮಾಡುವ ರೈತರಿಗೆ ಹಾವು ಕಚ್ಚಿ ಸಾವನ್ನಪ್ಪಿದವರ ಸಂಖ್ಯೆ ಎಷ್ಟು ;

(ಆ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಹಾವು ಕಚ್ಚಿದವರಿಗೆ ಔಷಧಿ ದಾಸ್ತಾನು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಹಾವು ಕಚ್ಚಿದವರಿಗೆ ಔಷಧಿಯನ್ನು ಸರ್ಕಾರಿ ಆಸ್ಪತ್ರೆಗಳಲ್ಲಿ ಶೇಖರಿಸಲು ಸರ್ಕಾರಕ್ಕೆ ಇರುವ ತೊಂದರೆ ಏನು (ಪೂರ್ಣ ಮಾಹಿತಿ ನೀಡುವುದು);

(ಈ) ಮಂಡ್ಯ ಜಿಲ್ಲೆಯಲ್ಲಿ ಇದುವರೆವಿಗೂ ಎಷ್ಟು ಸರ್ಕಾರಿ ಆಸ್ಪತ್ರೆಗಳಲ್ಲಿ ಹಾವು ಕಚ್ಚಿದ ದಾಸ್ತಾನು ಮಾಡಲಾಗಿದೆಯೇ (ತಾಲ್ಲೂಕುವಾರು ಮಾಹಿತಿ ನೀಡುವುದು) ?

**ಸರ್ಕಾರಿ ಬಸ್ ನಿಲ್ದಾಣ**

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೦೨೪ (೧೨೭೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :--

(ಅ) ಮದ್ದೂರು ತಾಲ್ಲೂಕು ಕೊಪ್ಪ ಗ್ರಾಮದಲ್ಲಿ ಸರ್ಕಾರಿ ಬಸ್ ನಿಲ್ದಾಣವಿಲ್ಲದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕಳೆದ ಅಧಿವೇಶನದಲ್ಲಿ ನಿವೇಶನ ತೊಂದರೆಯಿಂದ ಬಸ್ ನಿಲ್ದಾಣ ನಿರ್ಮಿಸಲಾಗಿಲ್ಲ ಈಗ ಪ್ರಾರಂಭಿಸಲಾಗುವುದೆಂದು ಸದನದಲ್ಲಿ ಭರವಸೆ ನೀಡಿದ್ದರೂ ಇನ್ನೂವರೆಗೆ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ ಈಗಲಾದರೂ ಸರ್ಕಾರ ಕ್ರಮ ಕೈಗೊಳ್ಳುವದೇ ?

## ನಂಜುಂಡಪ್ಪ ವರದಿ ಅನುಷ್ಠಾನ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ)–**

೧೦೨೫ (೧೨೮೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಡಾ: ಡಿ.ಎಂ. ನಂಜುಡಪ್ಪ ವರದಿ ಅನುಷ್ಠಾನದ ಯೋಜನೆಯಡಿ ಕಳೆದ ೩ ವರ್ಷಗಳಲ್ಲಿ ಅಂದರೆ ೨೦೧೨-೧೩, ೨೦೧೩-೧೪, ೨೦೧೪-೧೫ನೇ ಸಾಲಿನಲ್ಲಿ ಹಿಂದುಳಿದ ತಾಲ್ಲೂಕುಗಳಿಗೆ ಒದಗಿಸಿರುವಂತಹ ಅನುದಾನ ಮೊತ್ತವೆಷ್ಟು ;

(ಆ) ಈ ಪೈಕಿ ಮಂಜೂರಾದ ಅನುದಾನ, ಬಿಡುಗಡೆಯಾದ ಅನುದಾನ ಹಾಗೂ ಖರ್ಚಾದ ಹಣದ ವಿವರಗಳನ್ನು ತಾಲ್ಲೂಕುವಾರು ಒದಗಿಸುವುದು ;

(ಇ) ಸದರಿ ಸಮಿತಿಯ ವರದಿ ಅನುಷ್ಠಾನಗೊಂಡ ನಂತರ ಹಿಂದುಳಿದ ತಾಲ್ಲೂಕುಗಳ ಸ್ಥಿತಿ-ಗತಿಗಳೇನು; ಹಿಂದುಳಿಯುವಿಕೆಯಲ್ಲಿ ಯಾವುದಾದರೂ ಅಭಿವೃದ್ಧಿಯೊಂದಿಗೆ ಬದಲಾವಣೆಗಳಾಗಿವೆಯೇ; ಹಾಗಿದ್ದಲ್ಲಿ, ಅಂತಹ ಅಭಿವೃದ್ಧಿ ವಿವರಗಳನ್ನು ತಾಲ್ಲೂಕುವಾರು ಮಾಹಿತಿ ನೀಡುವುದು ;

(ಈ) ಈ ನಿಟ್ಟಿನಲ್ಲಿ ಸದರಿ ಯೋಜನೆಯ ಸಮಗ್ರ ವಿವರಗಳ ಸ್ಥಿತಿ-ಗತಿ ಕುರಿತು ಸರ್ಕಾರ ವಿಮರ್ಶಾತ್ಮಕ ಪ್ರಗತಿ ಪರಿಶೀಲನಾ ವರದಿಗಳನ್ನು ತಯಾರಿಸಲಾಗಿದೆಯೇ (ಇದ್ದರೆ, ವರದಿ ಸಹಿತ ವಿವರ ಒದಗಿಸುವುದು) ?

## ಟ್ರಕ್ ಟರ್ಮಿನಲ್ ಸ್ಥಾಪನೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೦೨೬ (೧೨೮೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ಜಿಲ್ಲೆಯ ಹೊಸಪೇಟೆ ನಗರದ ಹೊರವಲಯದಲ್ಲಿ ಟ್ರಕ್ ಟರ್ಮಿನಲ್ ಸ್ಥಾಪಿಸುವ ಯೋಜನೆ ಸರ್ಕಾರದ ಮುಂದೆ ಇದೆಯೆ ; ಇದ್ದರೆ, ಸ್ವಾಧೀನಪಡಿಸಿಕೊಂಡಿರುವ ಭೂಮಿ, ಇತರೆ ಸಂಪೂರ್ಣ ವಿವರ ನೀಡುವುದು ;

(ಆ) ಸದರಿ ಯೋಜನೆ ಕಾಮಗಾರಿ ವಿಳಂಬದಿಂದ ಸಂಚಾರಕ್ಕೆ ಸಾರಿಗೆ, ಲಾರಿಗಳ ಮತ್ತು ಜನಸಾಮಾನ್ಯರಿಗೆ ಆಗುತ್ತಿರುವ ಅನಾನುಕೂಲತೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ವಿಳಂಬಕ್ಕೆ ಕಾರಣಗಳೇನು ;

(ಇ) ಈ ಯೋಜನೆ ಎಷ್ಟು ಸಮಯದಲ್ಲಿ ಪೂರ್ಣಗೊಳಿಸಿ ಸಂಚಾರಕ್ಕೆ, ಸಾರಿಗೆಗೆ, ಜನಸಾಮಾನ್ಯರಿಗೆ ಅನುಕೂಲ ಮಾಡಿಕೊಡುವ ಯೋಜನೆ ಸರ್ಕಾರದ ಮುಂದಿದೆ ?

## ರೋಗಿಗಳಿಗೆ ನಕಲಿ ವೈದ್ಯರಿಂದ ಚಿಕಿತ್ಸೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೦೨೭ (೧೨೮೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ವೈದ್ಯಕೀಯ ಪದವಿ ಪಡೆಯದೇ ರೋಗಿಗಳಿಗೆ ನಕಲಿ ವೈದ್ಯರು ಚಿಕಿತ್ಸೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ನಕಲಿ ವೈದ್ಯರ ಹಾವಳಿ

ತಡೆಗಟ್ಟಲು ಸರ್ಕಾರ ಇದುವರೆಗೆ ತೆಗೆದುಕೊಂಡಿರುವ ಕ್ರಮಗಳೇನು (ವಿವರಿಸುವುದು) ;

(ಆ) ರಾಜ್ಯದಲ್ಲಿ ನಕಲಿ ವೈದ್ಯರ ಸೇವೆಯಿಂದಾಗಿ ಅಸುನೀಗಿದ ಜನರ ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರ ನೀಡುವುದು) ;

(ಇ) ಇಲ್ಲಿಯವರೆಗೆ ಎಷ್ಟು ನಕಲಿ ವೈದ್ಯರನ್ನು ಗುರುತಿಸಲಾಗಿದೆ ; ಮತ್ತು ಅವರ ವಿರುದ್ಧ ತೆಗೆದುಕೊಂಡ ಕಾನೂನು ಕ್ರಮಗಳೇನು (ವಿವರ ನೀಡುವುದು) ;

(ಈ) ಇನ್ನು ಮುಂದೆ ನಕಲಿ ವೈದ್ಯರನ್ನು ಶಾಶ್ವತವಾಗಿ ನಿಯಂತ್ರಿಸಲು ಸರ್ಕಾರವು ಪರ್ಯಾಯವಾಗಿ ಯಾವ ಯೋಜನೆ ರೂಪಿಸಿದೆ (ವಿವರ ನೀಡುವುದು) ?

## ಬಾಲಕರ ಮತ್ತು ಬಾಲಕಿಯರ ವಸತಿ ಶಾಲೆಗಳು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೦೨೮ (೧೨೮೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೈದ್ರಾಬಾದ್ ಕರ್ನಾಟಕ ಭಾಗದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಮತ್ತು ಹಿಂದುಳಿದ ವರ್ಗಗಳ ಇಲಾಖೆಯ ಒಟ್ಟು ವಸತಿ ಶಾಲೆಗಳು ಎಷ್ಟು ; ಅವುಗಳಲ್ಲಿ ಬಾಲಕರ ಮತ್ತು ಬಾಲಕಿಯರ ವಸತಿ ಶಾಲೆಗಳು ಪ್ರತ್ಯೇಕವಾಗಿ ಜಿಲ್ಲಾವಾರು ಮಾಹಿತಿ ನೀಡುವುದು ;

(ಆ) ಈ ವಸತಿ ಶಾಲೆಗಳಿಗೆ ಇರುವ ಕಟ್ಟಡಗಳೆಷ್ಟು ಮತ್ತು ಖಾಸಗಿ ಕಟ್ಟಡಗಳೆಷ್ಟು ; ಇನ್ನೂ ಎಷ್ಟು ವಸತಿ ಶಾಲೆಗಳಿಗೆ ಸರ್ಕಾರಿ ಕಟ್ಟಡದ ಅವಶ್ಯಕತೆ ಇದೆ (ವಿವರ ನೀಡುವುದು) ;

(ಇ) ಸರ್ಕಾರಿ ವಸತಿ ಶಾಲಾ ಕಟ್ಟಡಗಳಿಗೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ; ಅಂತಹ ಶಾಲೆಗಳ ಸಂಖ್ಯೆ ಎಷ್ಟು ; ಮೂಲಭೂತ ಸೌಕರ್ಯಗಳ ಕೊರತೆ ಇರುವ ವಸತಿ ಶಾಲೆಗಳ ಬಗ್ಗೆ ಸರ್ಕಾರದ ಮುಂದಿನ ಕ್ರಮಗಳೇನು (ಜಿಲ್ಲಾವಾರು ವಿವರ ನೀಡುವುದು) ;

(ಈ) ಈ ಎರಡೂ ಇಲಾಖೆಯಿಂದ ನಡೆಯುತ್ತಿರುವ ವಸತಿ ಶಾಲೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಮತ್ತು ಖಾಲಿ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು (ಹುದ್ದೆವಾರು ಮತ್ತು ಜಿಲ್ಲಾವಾರು ವಿವರ ನೀಡುವುದು) ;

(ಉ) ಹೈದ್ರಾಬಾದ್ ಕರ್ನಾಟಕ ಭಾಗದ ೬ ಜಿಲ್ಲೆಗಳಲ್ಲಿ ಹೊಸದಾಗಿ ವಸತಿ ಶಾಲೆಗಳು ಪ್ರಾರಂಭಿಸುವ ಪ್ರಸ್ತಾವನೆಗಳು ಸರ್ಕಾರದ ಮುಂದಿದೆಯೇ (ಅವುಗಳ ವಿವರ ನೀಡುವುದು) ?

## ಅನ್ನಭಾಗ್ಯ ಮತ್ತು ಪಡಿತರ ಚೀಟಿ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೦೨೯ (೧೨೮೪) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಸರ್ಕಾರದ ಮಹತ್ವಕಾಂಕ್ಷಿ ಯೋಜನೆಯಾದ "ಅನ್ನಭಾಗ್ಯ ಯೋಜನೆ" ಜಾರಿಗೆ ಬಂದಿರುವುದು ಸರಿಯಷ್ಟೆ ; ಆದರೆ, ಬೆಳಗಾವಿ ಜಿಲ್ಲೆಯ ಚಿಕ್ಕೋಡಿ, ರಾಯಬಾಗ, ಅಥಣಿ ತಾಲ್ಲೂಕಿನ ಹಾಗೂ ಜಿಲ್ಲೆಯ ಅನೇಕ ಕಡು ಬಡವರಿಗೆ ಬಿ.ಪಿ.ಎಲ್. ಕಾರ್ಡುಗಳು ಸಿಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅರ್ಹ ಕಡು ಬಡವರು ಅರ್ಜಿ ಸಲ್ಲಿಸಿದ್ದರೂ ಕೂಡಾ ಇನ್ನೂವರೆಗೆ ಕಾರ್ಡುಗಳು ವಿಲೇವಾರಿ ಆಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;.

(ಇ) ಹಾಗಿದ್ದಲ್ಲಿ, ಚಿಕ್ಕೋಡಿ, ಅಥಣಿ, ರಾಯಬಾಗ ಹಾಗೂ ಇನ್ನುಳಿದ ಏಳು (೭) ತಾಲ್ಲೂಕುಗಳಲ್ಲಿರುವ ಬಿ.ಪಿ.ಎಲ್. ಕಾರ್ಡುಗಳು ಹಾಗೂ ಎ.ಪಿ.ಎಲ್. ಕಾರ್ಡುಗಳು ಎಷ್ಟು (ತಾಲ್ಲೂಕುವಾರು ಹಾಗೂ ಗ್ರಾಮವಾರು ವಿವರ ನೀಡುವುದು) ;

(ಈ) ಈಗಾಗಲೇ ಸಲ್ಲಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ಹಾಗೂ ಗ್ರಾಮವಾರು ವಿವರ ನೀಡುವುದು) ಸದರಿ ಕಾರ್ಡುಗಳ ವಿಲೇವಾರಿ ಎಷ್ಟು ದಿನಗಳಲ್ಲಿ ಕೈಗೊಳ್ಳಲಾಗುವುದು ;

(ಉ) ಇದರಿಂದ "ಅನ್ನಭಾಗ್ಯ ಯೋಜನೆ" ಬಡವರಿಗೆ ತಲುಪಲು ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ೨೦೦೬ರಿಂದ ೨೦೧೧ರವರೆಗೆ ರಾಜ್ಯದಲ್ಲಿ ಪಡಿತರ ಚೀಟಿ ವಿತರಣೆ ಗುತ್ತಿಗೆ ಪಡೆದ "ಕೋಮ್ಯಾಟ್ ಕಂಪನಿ"ಯಿಂದ ಆದ ಅಕ್ರಮ ರೇಷನ್ ಕಾರ್ಡ್ ವಿತರಣೆ ಬಗ್ಗೆ ಕಂಪನಿ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ನೂತನವಾಗಿ ಜಾರಿಗೊಳಿಸಿದ "ವಿದ್ಯಾಸಿರಿ ಯೋಜನೆ"

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೦೩೦ (೧೨೮೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೂತನವಾಗಿ ಜಾರಿಗೊಳಿಸಿರುವ "ವಿದ್ಯಾಸಿರಿ ಯೋಜನೆ"ಯಲ್ಲಿ ಯಾವ ಯಾವ ವರ್ಗದವರನ್ನು ಸೇರ್ಪಡೆಗೊಳಿಸಲಾಗಿದೆ ;

(ಆ) ಈ ಯೋಜನೆ ಪಡೆಯಲು ಇರುವ ಸರ್ಕಾರದ ಮಾನದಂಡಗಳೇನು ;

(ಇ) ಬಾಕಿ ಉಳಿದ ಎಲ್ಲಾ ವರ್ಗದ ವಿದ್ಯಾರ್ಥಿಗಳನ್ನು ಈ ಯೋಜನೆಯಡಿ ಸೇರಿಸುವ ವಿಚಾರ ಸರ್ಕಾರದ ಮುಂದಿದೆಯೇ ?

## ವೈದ್ಯಕೀಯ ಸೀಟುಗಳಲ್ಲಿ ಉಂಟಾಗಿರುವ ಕಡಿತ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೦೩೧ (೧೨೮೭) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಸರ್ಕಾರಿ ವೈದ್ಯಕೀಯ ಸೀಟುಗಳ ಸಂಖ್ಯೆ ಕಡಿಮೆಯಾಗಲು ಕಾರಣವೇನು ; ವೈದ್ಯಕೀಯ ಸೀಟುಗಳು ಕಡಿಮೆಯಾಗಿ ಪ್ರತಿಭಾನ್ವಿತ ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನೆರೆಹೊರೆಯ ರಾಜ್ಯಗಳಂತೆ ನಮ್ಮ ರಾಜ್ಯದಲ್ಲಿ ಖಾಸಗಿ ವೈದ್ಯಕೀಯ ಕಾಲೇಜುಗಳಿಂದ ಶೇ. ೮೦ರಷ್ಟು ಸೀಟುಗಳನ್ನು ಸರ್ಕಾರಕ್ಕೆ ಪಡೆಯಲು ಕೈಗೊಂಡಿರುವ ಕ್ರಮಗಳೇನು ;

(ಇ) ರಾಜ್ಯದಲ್ಲಿರುವ ವೈದ್ಯಕೀಯ ಡೀಮ್ಡ್ ವಿಶ್ವವಿದ್ಯಾಲಯಗಳೆಷ್ಟು ; ಇವುಗಳಲ್ಲಿರುವ ಎಂ.ಬಿ.ಬಿ.ಎಸ್. ಮತ್ತು ಸ್ನಾತಕೋತ್ತರ ಸೀಟುಗಳೆಷ್ಟು ;

(ಈ) ಸದರಿ ವೈದ್ಯಕೀಯ ಡೀಮ್ಡ್ ವಿಶ್ವವಿದ್ಯಾಲಯಗಳು ೨೦೧೩–೧೪ ಮತ್ತು ೨೦೧೪–೧೫ನೇ ಸಾಲುಗಳಲ್ಲಿ ಸರ್ಕಾರಕ್ಕೆ ನೀಡಿರುವ ವೈದ್ಯಕೀಯ ಸೀಟುಗಳೆಷ್ಟು ;

(ಉ) ಇಂತಹ ಡೀಮ್ಡ್ ವಿಶ್ವವಿದ್ಯಾಲಯಗಳನ್ನು ರದ್ದುಪಡಿಸಲು ಸಂಬಂಧಿಸಿದಂತೆ ಕಾಯ್ದೆಗೆ ಸೂಕ್ತ ತಿದ್ದುಪಡಿ ತಂದು, ಶೇ. ೫೦ರಷ್ಟು ಸೀಟುಗಳನ್ನು ಸರ್ಕಾರದ ಕೋಟಾಕ್ಕೆ ಪಡೆದು ಬಡ ಪ್ರತಿಭಾನ್ವಿತರಿಗೆ ಅನುಕೂಲ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸರ್ಕಾರಿ ಹಾಸ್ಟೆಲ್‌ಗಳ ನಿರ್ಮಾಣದಲ್ಲಿ ಅವ್ಯವಹಾರ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೦೩೨ (೧೨೮೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾಸನ ಜಿಲ್ಲೆಯಲ್ಲಿರುವ ಸರ್ಕಾರಿ ಬಾಲಕ, ಬಾಲಕಿಯರ ಹಾಸ್ಟೆಲ್‌ಗಳೆಷ್ಟು ; ಇವುಗಳಲ್ಲಿರುವ ವಿದ್ಯಾರ್ಥಿಗಳೆಷ್ಟು ;

(ಆ) ಜಿಲ್ಲೆಯಲ್ಲಿ ನಿರ್ಮಾಣ ಹಂತದಲ್ಲಿರುವ ಸರ್ಕಾರಿ ಹಾಸ್ಟೆಲ್‌ಗಳೆಷ್ಟು; ಸದರಿ ಕಟ್ಟಡಗಳು ಯಾವ ಹಂತದಲ್ಲಿರುತ್ತವೆ ;

(ಇ) ಹಳೇಬೀಡು ಸಮೀಪದ ಬೆಣ್ಣೆಗುಡ್ಡೆ ಹಾಸ್ಟೆಲ್ ಕಟ್ಟಡ ನಿರ್ಮಾಣ ಯಾವಾಗ ಪ್ರಾರಂಭಿಸಲಾಯಿತು ಮತ್ತು ಇದಕ್ಕೆ ವ್ಯಯಿಸಿರುವ ಮೊಬಲಗೆಷ್ಟು ;

(ಈ) ಸದರಿ ಬೆಣ್ಣೆಗುಡ್ಡೆ ಹಾಸ್ಟೆಲ್ ಕಟ್ಟಡ ಪೂರ್ಣಗೊಳ್ಳುವ ಮೊದಲೇ ಶಿಥಿಲಾವಸ್ಥೆಗೆ ತಲುಪಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಹಾಸ್ಟೆಲ್ ವ್ಯವಸ್ಥೆಯಿಲ್ಲದೇ ಇರುವ ಇಲ್ಲಿನ ಬಡ ಮಕ್ಕಳಿಗೆ ಸರ್ಕಾರ ಮಾಡಿರುವ ವ್ಯವಸ್ಥೆಯೇನು ?

## ಹೊಸ ಸರ್ಕಾರಿ ಆಸ್ಪತ್ರೆಗಳ ಸ್ಥಾಪನೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೦೩೩ (೧೨೯೦) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲೆಗೊಂದು ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ ಮಾಡುವ ಉದ್ದೇಶ ಸರ್ಕಾರಕ್ಕಿದೆಯೇ ;

(ಆ) ಹಾಗಿದ್ದರೆ, ಈಗ ವೈದ್ಯಕೀಯ ಕಾಲೇಜುಗಳು ಇಲ್ಲದಿರುವ ಜಿಲ್ಲೆಗಳಲ್ಲಿ ಹೊಸ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಡಯಾಲಿಸಿಸ್ ಘಟಕಗಳು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೦೩೪ (೧೨೮೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರತಿ ಜಿಲ್ಲೆಯ ತಾಲ್ಲೂಕು ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಘಟಕವನ್ನು ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಆ) ಗ್ರಾಮೀಣ ಭಾಗದಲ್ಲಿನ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳೆಷ್ಟು ;

(ಇ) ಕಡ್ಡಾಯವಾಗಿ ಗ್ರಾಮೀಣ ಆಸ್ಪತ್ರೆಗಳಲ್ಲಿ ವೈದ್ಯರು ಸೇವೆ ಮಾಡಲು ಸರ್ಕಾರ ರೂಪಿಸಿರುವ ನಿಯಮಗಳೇನು ?

## ಸರ್ಕಾರಿ ಆಸ್ಪತ್ರೆಗಳು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೦೩೫ (೧೨೯೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; ಹಾಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರ ಸಂಖ್ಯೆ ಎಷ್ಟು ;

(ಆ) ಗ್ರಾಮೀಣ ಭಾಗದಲ್ಲಿನ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳೆಷ್ಟು ;

(ಇ) ಕಡ್ಡಾಯವಾಗಿ ಗ್ರಾಮೀಣ ಆಸ್ಪತ್ರೆಗಳಲ್ಲಿ ವೈದ್ಯರು ಸೇವೆ ಮಾಡಲು ಸರ್ಕಾರ ರೂಪಿಸಿರುವ ನಿಯಮಗಳೇನು ?

## ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗಿರುವ ಯೋಜನೆಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೦೩೬ (೧೨೯೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಜನಾಂಗದವರೆಗೆ ಇರುವ ಯೋಜನೆಗಳು ಯಾವುವು (ವಿವರ ನೀಡುವುದು) ;

(ಆ) ೨೦೧೨ ರಿಂದ ೨೦೧೪ನೇ ಸಾಲಿನಲ್ಲಿ ಈ ಯೋಜನೆಗಳಿಗೆ ಬೀದರ್ ಜಿಲ್ಲೆಯಲ್ಲಿ ಆಯ್ಕೆಯಾದ ಫಲಾನುಭವಿಗಳೆಷ್ಟು; (ತಾಲ್ಲೂಕುವಾರು ಯೋಜನೆವಾರು ಫಲಾನುಭವಿಗಳ ಹೆಸರುಗಳೊಂದಿಗೆ ಮಾಹಿತಿ ನೀಡುವುದು) ;

(ಇ) ಡಾ॥ ಅಂಬೇಡ್ಕರ್, ಡಿ. ದೇವರಾಜು ಅರಸು ಹಾಗೆ ಇನ್ನಿತರೆ ಅಭಿವೃದ್ಧಿ ನಿಗಮಗಳ ಫಲಾನುಭವಿಗಳಿಗೆ ಮಂಜೂರಾದ ಸಾಲ ಸೌಲಭ್ಯಗಳಿಗೆ ಬ್ಯಾಂಕ್‌ಗಳಲ್ಲಿ ಸಾಲ ಮಂಜೂರು ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಜಿಲ್ಲೆಯಲ್ಲಿ ಒಟ್ಟು ಎಷ್ಟು ಫಲಾನುಭವಿಗಳಿಗೆ ಯಾವ ಯಾವ ಯೋಜನೆಗಳಲ್ಲಿ ಮಂಜೂರು ಮಾಡಲಾಗಿದೆ (ನಿಗಮವಾರು ವರ್ಷವಾರು ವಿವರ ನೀಡುವುದು) ?

## ಕೊಳವೆ ಬಾವಿಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು)** :-

೧೦೩೭ (೧೨೯೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ ಜಿಲ್ಲೆಗೆ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ನಿಗಮದ ವತಿಯಿಂದ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಮಂಜೂರಾದ ಕೊಳವೆ ಬಾವಿಗಳೆಷ್ಟು (ವರ್ಷವಾರು ಫಲಾನುಭವಿಗಳ ಸಂಪೂರ್ಣ ವಿವರ ನೀಡುವುದು) ;

(ಆ) ಯೋಜನೆಯಡಿ ಮಂಜೂರಾದ ಫಲಾನುಭವಿಗಳಿಗೆ ಕೊಳವೆ ಬಾವಿಗಳನ್ನು ಕೊರೆಸಲು ಮಂಜೂರು ಮಾಡಿದ ಹಣವೆಷ್ಟು ; ಕೊರೆಯಲು ಗುತ್ತಿಗೆ ನೀಡಲಾದ ಗುತ್ತಿಗೆದಾರರ ಹೆಸರು ಮತ್ತು ಆ ಫಲಾನುಭವಿಗಳ ವಿವರ ತಾಲ್ಲೂಕು, ಗ್ರಾಮಗಳವಾರು ಮಾಹಿತಿ ನೀಡುವುದು ;

(ಇ) ಸುಮಾರು ಮಂಜೂರಾದ ಕೊಳವೆ ಬಾವಿಗಳು ಕೊರೆಸಲಾಗದೆ ತಡೆಹಿಡಿಯಲಾದವು ಎಷ್ಟು (ಪಟ್ಟಿ ಒದಗಿಸುವುದು) ;

(ಈ) ಹಾಗಿಲ್ಲದಿದ್ದಲ್ಲಿ, ವಿಳಂಬವಾಗಲು ಕಾರಣವೇನು (ವಿವರ ನೀಡುವುದು) ?

## ವಿವಿಧ ಲೆಕ್ಕ ಶೀರ್ಷಿಕೆಗಳಡಿ ಬಿಡುಗಡೆ ಮಾಡಿದ ಅನುದಾನ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೩೮ (೧೩೦೦) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಗೆ ವಿವಿಧ ಲೆಕ್ಕ ಶೀರ್ಷಿಕೆಗಳಡಿ ಬಿಡುಗಡೆಯಾಗಿರುವ ಒಟ್ಟು ಮೊತ್ತವೆಷ್ಟು (ವರ್ಷ ಹಾಗೂ ಲೆಕ್ಕ ಶೀರ್ಷಿಕೆವಾರು ಪೂರ್ಣ ವಿವರ ನೀಡುವುದು) ;

(ಆ) ವಿವಿಧ ಲೆಕ್ಕ ಶೀರ್ಷಿಕೆಗಳಡಿ ಬಿಡುಗಡೆಯಾದ ಅನುದಾನವನ್ನು ಯಾವ ಯಾವ ಕಾಮಗಾರಿಗಳಿಗೆ ಉಪಯೋಗಿಸಲಾಗಿದೆ ; ಆ ಕಾಮಗಾರಿಗಳ ಫೋಟೋ ಪ್ರತಿ ಹಾಗೂ ಗುತ್ತಿಗೆದಾರರ ಹೆಸರು, ಮಾಡಲಾದ ವೆಚ್ಚ, ಕಾಮಗಾರಿಯ ಹೆಸರುಗಳೊಂದಿಗೆ (ತಾಲ್ಲೂಕುವಾರು, ವರ್ಷವಾರು, ಲೆಕ್ಕಶೀರ್ಷಿಕೆವಾರು ಮಾಹಿತಿ ನೀಡುವುದು) ;

(ಇ) ಅಪೂರ್ಣಗೊಂಡಿರುವ ಕಾಮಗಾರಿಗಳನ್ನು ಸರ್ಕಾರ ಪೂರ್ಣಗೊಳಿಸಲು ಕ್ರಮ ಕೈಗೊಳ್ಳುವುದೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು (ವಿವರ ನೀಡುವುದು) ?

## ಆಸ್ಪತ್ರೆ ಮೇಲ್ದರ್ಜೆಗೇರಿಸುವುದು

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೩೯ (೧೨೯೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ೬ ವಿಧಾನ ಸಭಾ ಕ್ಷೇತ್ರಗಳಲ್ಲಿ ಸಾರ್ವಜನಿಕ ಸರ್ಕಾರಿ ಆಸ್ಪತ್ರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸದರಿ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಯಾವಾಗ ಮೇಲ್ದರ್ಜೆಗೇರಿಸಲಾಗುವುದು ; ಅದಕ್ಕೇನಾದರೂ ಕಾಲಮಿತಿಯನ್ನು ನಿಗದಿ ಪಡಿಸಲಾಗಿದೆಯೇ (ಸಂಪೂರ್ಣ ವಿವರ ನೀಡುವುದು) ;

(ಈ) ತಾಲ್ಲೂಕು ಕೇಂದ್ರದಲ್ಲಿರುವ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಸೌಲಭ್ಯಗಳ ಕೊರತೆ ಇರುವುದಲ್ಲದೆ, ಅಲ್ಲಿನ ವೈದ್ಯರುಗಳ ನಿರ್ಲಕ್ಷ್ಯದಿಂದ ರೋಗಿಗಳು ಸಂಕಷ್ಟ ಅನುಭವಿಸುತ್ತಿರುವ ಬಗ್ಗೆ ಸರ್ಕಾರ ಯಾವ ಪರಿಹಾರ ಕ್ರಮಗಳನ್ನು ಕೈಗೊಂಡಿದೆ (ವಿವರ ನೀಡುವುದು) ?

## ಹೊರಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಖಾಯಂಮಾತಿಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೦೪೦ (೧೩೦೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಗೆ ಸೇರಿದ ವಸತಿ ಶಾಲೆಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು ತಮ್ಮ ಖಾಯಂಮಾತಿಗೆ ನ್ಯಾಯಾಲಯದ ಮೊರೆ ಹೋಗಿದ್ದು,

ನ್ಯಾಯಾಲಯ ನೀಡಿರುವ ಆದೇಶದ ಕುರಿತು ಸಂಕ್ಷಿಪ್ತ ವಿವರ ನೀಡುವುದು ;

(ಆ) ೨೦೧೧ರಲ್ಲಿ ಸದರಿ ಶಿಕ್ಷಕರು ೨ನೇ ಬಾರಿ ಈ ವಿಚಾರದಲ್ಲಿ ಇಲಾಖೆಯ ಮೇಲೆ ನ್ಯಾಯಾಂಗ ನಿಂದನೆ ಅರ್ಜಿ ಸಲ್ಲಿಸಿದ್ದು ನಿಜವೇ ; ಕಾರಣವೇನು (ವಿವರ ನೀಡುವುದು) ?

## ವಸತಿ ನಿಲಯ ಮತ್ತು ವಸತಿ ಶಾಲೆಗಳು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೦೪೧ (೧೩೦೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಇಲಾಖೆಯ ಎಲ್ಲಾ ವಸತಿ ಶಾಲೆ/ವಸತಿ ನಿಲಯಗಳಲ್ಲಿ ನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಮತ್ತು ಲಿಪಿಕ ನೌಕರರ ಹಾಗೂ ಡಿ ವರ್ಗದ ಸಿಬ್ಬಂದಿಗಳ ಮಾಹಿತಿಯನ್ನು ನೀಡುವುದು (ಮಂಜೂರು, ಭರ್ತಿ ಖಾಲಿ ವಿವರಗಳೊಂದಿಗೆ) ;

(ಆ) ಇವರುಗಳಿಗೆ ನೀಡಲಾಗುತ್ತಿರುವ ಸಂಭಾವನೆ ಎಷ್ಟು (ಜಿಲ್ಲಾವಾರು ಮಾಹಿತಿಯನ್ನು ನೀಡುವುದು) ;

(ಇ) ಆ ಪೈಕಿ ಹೊರಸಂಪನ್ಮೂಲ ಏಜೆನ್ಸಿಯಿಂದ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು (ಜಿಲ್ಲಾವಾರು, ಹುದ್ದೆಗಳವಾರು ಮಾಹಿತಿ ನೀಡುವುದು) ;

(ಈ) ಸದರಿ ಸಿಬ್ಬಂದಿಗೆ ನೀಡಲಾಗುತ್ತಿರುವ ಸಂಭಾವನೆಯ ವಿವರಗಳನ್ನು ಜಿಲ್ಲಾವಾರು ಮತ್ತು ಹುದ್ದೆಗಳವಾರು ನೀಡುವುದು ;

(ಉ) ಹೊರಸಂಪನ್ಮೂಲ ಏಜೆನ್ಸಿಯಿಂದ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಭಾವನೆಯನ್ನು ನಿರ್ಧರಿಸುವ ಅಧಿಕಾರ ಯಾರಿಗಿದೆ ; ಇದು ಎಲ್ಲಾ ಜಿಲ್ಲೆಗಳಿಗೂ ಏಕರೂಪದಲ್ಲಿ ನಿರ್ಧರಣೆಯಾಗಿದೆಯೇ ;

(ಊ) ಕರ್ನಾಟಕ ವಸತಿ ಶಿಕ್ಷಣಗಳ ಸಂಘ, ಬೆಂಗಳೂರು ಇವರು ಎಲ್ಲಾ ಸಿಬ್ಬಂದಿಗಳಿಗೆಂದು ಬಿಡುಗಡೆ ಮಾಡುತ್ತಿರುವ ಸಂಭಾವನೆ ಎಷ್ಟು (ವಿವರಗಳನ್ನು ನೀಡುವುದು) ?

## ಇಲಾಖೆಗಳಲ್ಲಿ ಹೆಚ್.ಆರ್.ಎಂ.ಎಸ್. ಅಳವಡಿಕೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೦೪೨ (೧೩೦೫) ಪ್ರಧಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೆಚ್.ಆರ್.ಎಂ.ಎಸ್. (ಹ್ಯೂಮನ್ ರಿಸೋರ್ಸ್ ಮ್ಯಾನೇಜ್‌ಮೆಂಟ್ ಸಿಸ್ಟಮ್) ಅಳವಡಿಕೆ ಮಾಡಿಕೊಂಡಿರುವ ಇಲಾಖೆಗಳು ಯಾವುವು ; ಈ ಪದ್ಧತಿಯನ್ನು ಅಳವಡಿಸಿಕೊಳ್ಳದಂತೆ ವಿನಾಯಿತಿಯನ್ನು ಪಡೆದಿರುವ ಇಲಾಖೆಗಳು ಯಾವುವು ;.

(ಆ) ಪ್ರತಿ ಇಲಾಖೆಗೂ ಈ ಪದ್ಧತಿ ಕಡ್ಡಾಯವೇ ; ಇದರ ಪ್ರಯೋಜನಗಳೇನು ;

(ಇ) ಈ ಹೆಚ್.ಆರ್.ಎಂ.ಎಸ್. ಪದ್ಧತಿಯ ನಿರ್ವಹಣೆ ಯಾವ ಕಾರ್ಯಾಲಯದಿಂದ ಆಗುತ್ತಿದೆ ; ಈ ಕಾರ್ಯಾಲಯ ಸಂಪೂರ್ಣವಾಗಿ ಸರ್ಕಾರಿ ಕಛೇರಿಯೇ ಅಥವಾ ಹೊರಗುತ್ತಿಗೆಯೇನಾದರೂ ನೀಡಲ್ಪಟ್ಟಿದೆಯೇ ;

(ಈ) ಪ್ರತಿಯೊಂದು ಇಲಾಖೆಯವರು ತಮ್ಮ ಸಮಸ್ಯೆಗಳನ್ನು ಸರಿಪಡಿಸಿಕೊಳ್ಳಲು ಇರುವ ಮಾರ್ಗೋಪಾಯಗಳೇನು ;

(ಉ) ಜಿಲ್ಲಾ ಮಟ್ಟದಲ್ಲಿ ಈ ಪದ್ಧತಿಯ ನಿರ್ವಹಣೆಗೆ ಅನುಕೂಲ ಕಲ್ಪಿಸಲು ಸರ್ಕಾರ ಚಿಂತಿಸಿದೆಯೇ ; ಜಿಲ್ಲಾ ಮಟ್ಟದಲ್ಲಿ ಈ ಪದ್ಧತಿಯ ನಿರ್ವಹಣೆಯಿಲ್ಲದ ಕಾರಣದಿಂದಾಗಿ ಎಲ್ಲಾ ಇಲಾಖೆಗಳು ಪಡುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ತೊಂದರೆಗಳ ನಿವಾರಣೆಗೆ ಸರ್ಕಾರವು ಕೈಗೊಳ್ಳುವ ಅಥವಾ ಕೈಗೊಂಡಿರುವ ಕ್ರಮಗಳೇನು ?

## ವೈದ್ಯಕೀಯ ಕಾಲೇಜು ಕಟ್ಟಡ ನಿರ್ಮಾಣ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೦೪೩ (೧೩೦೭.) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :--

(ಅ) ಕೊಪ್ಪಳ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು ಕಟ್ಟಡ ನಿರ್ಮಾಣ ಕಾಮಗಾರಿ ಸದ್ಯ ಯಾವ ಹಂತದಲ್ಲಿದೆ ;

(ಆ) ಸದರಿ ಕಾಮಗಾರಿಗಾಗಿ ಸರ್ಕಾರ ಬಿಡುಗಡೆ ಮಾಡಿದ ಅನುದಾನ ಎಷ್ಟು ;

(ಇ) ಈ ಕಾಮಗಾರಿಯನ್ನು ಯಾವ ಗುತ್ತಿಗೆದಾರರಿಗೆ ನೀಡಲಾಗಿದೆ ; ಯಾವ ದಿನಾಂಕಕ್ಕೆ ಮುಕ್ತಾಯಗೊಳಿಸಲು ಗುತ್ತಿಗೆ ಕರಾರು ಮಾಡಿಕೊಳ್ಳಲಾಗಿದೆ ;

(ಈ) ಅಲ್ಲಿಯವರಿಗೂ ಬೇರೆ ಕಟ್ಟಡದಲ್ಲಿ ವೈದ್ಯಕೀಯ ಕಾಲೇಜು ಪ್ರಾರಂಭಿಸುವ ವಿಚಾರ ಸರ್ಕಾರಕ್ಕೆ ಇದೆಯೇ, ಇಲ್ಲವೇ (ಸ್ಪಷ್ಟಪಡಿಸುವುದು) ;

(ಉ) ಸದ್ಯ ಇದಕ್ಕಾಗಿ ಬೋಧಕ/ಅಧಿಕಾರಿ/ಸಿಬ್ಬಂದಿಗಳ ಮಂಜೂರು ಮಾಡಲಾದ ಹುದ್ದೆಗಳ ವಿವರಗಳನ್ನು ನೀಡುವುದು ; ಇವುಗಳಲ್ಲಿ ಸದ್ಯ ಭರ್ತಿ ಮಾಡಿದ ಹುದ್ದೆಗಳು ಎಷ್ಟು ?

## ಸರ್ಕಾರಿ ಆಯುರ್ವೇದ ಕಾಲೇಜುಗಳ ಸಿಬ್ಬಂದಿ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೦೪೪ (೧೩೧೦) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಸರ್ಕಾರಿ ಆಯುರ್ವೇದ ಕಾಲೇಜಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ಸಂಖ್ಯೆ ಎಷ್ಟು ; ಬೋಧಕ ಮತ್ತು ಬೋಧಕೇತರರ ಪ್ರತ್ಯೇಕ ವಿವರ ನೀಡುವುದು (ವೃಂದ ಮತ್ತು ಪದನಾಮದೊಂದಿಗೆ) ;

(ಆ) ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ವೃಂದ ಮತ್ತು ಪದನಾಮಗಳ ಸಹಿತ ವಿವರ ನೀಡುವುದು ;

(ಇ) ಈ ಸಿಬ್ಬಂದಿಗಳಲ್ಲಿ ಎಷ್ಟು ಜನ ನಿಯೋಜನೆ ಮೇರೆಗೆ ಅನ್ಯ ಸೇವೆ ಸಲ್ಲಿಸುತ್ತಿದ್ದಾರೆ (ಯಾವ ವರ್ಷದಿಂದ, ಎಲ್ಲಿ ಅವರ ಹೆಸರು ಹುದ್ದೆ ವಿವರ ನೀಡುವುದು) ;

(ಈ) ಖಾಲಿಯಿರುವ ಹುದ್ದೆಗಳ ಭರ್ತಿಗೆ ಯಾವ ಯಾವ ಕ್ರಮಗಳನ್ನು ಸರ್ಕಾರ ಕೈಗೊಳ್ಳಲಿದೆ ?

## ಔಷಧಿ ಖರೀದಿಗಾಗಿ ನೀಡಿರುವ ಅನುದಾನ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೦೪೫(೧೩೦೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ಔಷಧಿ ಖರೀದಿಗಾಗಿ ಬಳ್ಳಾರಿ ಜಿಲ್ಲೆಗೆ ನೀಡಿರುವ ಅನುದಾನ ಮತ್ತು ಔಷಧಿ ಪ್ರಮಾಣ ಎಷ್ಟು (ವರ್ಷವಾರು ಔಷಧಿಗಳ ಹೆಸರಿನೊಂದಿಗೆ ವಿವರ ನೀಡುವುದು) ;

(ಆ) ಖರೀದಿಸಿದ ಔಷಧಿಗಳನ್ನು ಯಾವ ತರಹದ ಖಾಯಿಲೆಗಳಿಗಾಗಿ ಉಪಯೋಗಿಸಲಾಗುತ್ತದೆ (ಪ್ರತಿಯೊಂದು ಔಷಧದ ವಿವರ ನೀಡುವುದು) ;

(ಇ) ಖರೀಸಿದ ಔಷಧಿಗಳಲ್ಲಿ ಎಷ್ಟು ಪ್ರಮಾಣ ಔಷಧಿ ವಿತರಿಸಲಾಗಿದೆ (ವರ್ಷವಾರು ವಿವರ ನೀಡುವುದು) ;

(ಈ) ಎಷ್ಟು ಔಷಧಿ ವಿತರಿಸದೆ ಉಳಿದಿದೆ ; ಅದರ ಪ್ರಮಾಣ ಮತ್ತು ಮೊತ್ತ ಎಷ್ಟು (ಮೂರು ವರ್ಷಗಳ ವರ್ಷವಾರು ವಿವರ ನೀಡುವುದು) ?

## ಮೊರಾರ್ಜಿ ವಸತಿ ಶಾಲೆಗಳು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೦೪೬ (೧೩೧೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಮೊರಾರ್ಜಿ ವಸತಿ ಶಾಲೆ, ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ, ಏಕಲವ್ಯ ವಸತಿ ಶಾಲೆಗಳು ಒಟ್ಟು ಎಷ್ಟು ; ಈ ಎಲ್ಲಾ ವಸತಿ ಶಾಲೆಗಳು ಸರ್ಕಾರಿ ಕಟ್ಟಡದಲ್ಲಿದೆಯೇ ; ಅಥವಾ ಬಾಡಿಗೆ ಕಟ್ಟಡದಲ್ಲಿದೆಯೇ ; ಬಾಡಿಗೆ ಕಟ್ಟಡದಲ್ಲಿರುವ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳಿವೆಯೇ ; ಪ್ರತಿ

ಶಾಲೆಗಳಲ್ಲಿರುವ ಶೌಚಾಲಯ, ಸ್ನಾನಗೃಹಗಳ ವಿವರ ನೀಡುವುದು ; (ಜಿಲ್ಲಾವಾರು) ಮಂಜೂರಾತಿ ಸಂಖ್ಯೆ ಅನುಕೂಲವಾಗಿದೆಯೇ ;

(ಆ) ಈ ಶಾಲೆಗಳ ಸುಧಾರಣೆ ಸಮಾಜ ಕಲ್ಯಾಣ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳಿಂದ ಹಾಗೂ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಿಂದ ಆಗಿದೆಯೇ ; ಆಗಿದ್ದಲ್ಲಿ, ಶಾಲೆಗಳ ಪ್ರಿನ್ಸಿಪಾಲ್ ಹಾಗೂ ಶಿಕ್ಷಕರು ಮಕ್ಕಳಿಗೆ ಕಿರುಕುಳ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಏನು ಕ್ರಮ ಕೈಗೊಳ್ಳಲಾಗಿದೆ ?

## ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಸಿ.ಇ.ಟಿ. ವಿದ್ಯಾರ್ಥಿಗಳಿಂದ ಶುಲ್ಕ ಪಾವತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ ) :–**

೧೦೪೭ (೧೩೧೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡಲು ಸಿ.ಇ.ಟಿ. ಮೂಲಕ ಪ್ರವೇಶ ಪಡೆದಿರುವ ಕೆಟಗರಿ–೧ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳಿಗೆ ಇಲಾಖೆ ಯಾವ ಯಾವ ಶುಲ್ಕಗಳನ್ನು ಕಾಲೇಜುಗಳಿಗೆ ಮರುಪಾವತಿಸಬೇಕಾಗಿದೆ (ವಿವರ ನೀಡುವುದು) ;

(ಆ) ಸದರಿ ಕಾಲೇಜಿನಲ್ಲಿ ಸಿ.ಇ.ಟಿ. ಮೂಲಕ ಪ್ರವೇಶ ಪಡೆದಿರುವ ಆರ್ಥಿಕವಾಗಿ ಹಿಂದುಳಿದ ಓ.ಬಿ.ಸಿ. ವಿದ್ಯಾರ್ಥಿಗಳ ತಲಾ ವಾರ್ಷಿಕ ಯಾವ ಯಾವ ಶುಲ್ಕಗಳ ಎಷ್ಟು ಮೊತ್ತವನ್ನು ಇಲಾಖೆ ಮರು ಭರಿಸುತ್ತಿದೆ (ವಿವರ ನೀಡುವುದು) ;

(ಇ) ಸದರಿ ವಿದ್ಯಾರ್ಥಿಗಳ ಸಂಬಂಧ ಇದುವರೆವಿಗೂ ಮರು ಭರಿಸುವಿಕೆಯ ಬಾಕಿ ಮೊತ್ತವೆಷ್ಟು ;

(ಈ) ಬಾಕಿ ಮೊತ್ತ ಪಾವತಿಸುವಲ್ಲಿ ವಿಳಂಬ ಉಂಟಾಗುತ್ತಿರಲು ಕಾರಣಗಳೇನು (ವಿವರ ನೀಡುವುದು) ;

(ಉ) ಸದರಿ ಬಾಕಿ ಮೊತ್ತವನ್ನು ಯಾವ ಕಾಲಮಿತಿಯಲ್ಲಿ ಪಾವತಿಸಲಾಗುವುದು ?

**ಆಯುಷ್ ಆಸ್ಪತ್ರೆಗಳಲ್ಲಿ ವೈದ್ಯರು ಮತ್ತು ಸಿಬ್ಬಂದಿ ಕೊರತೆ**

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೦೪೮ (೧೨೬೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಗ್ರಾಮೀಣ ಹಾಗೂ ಜಿಲ್ಲಾ ಮಟ್ಟದ ಆಯುಷ್ ಆಸ್ಪತ್ರೆಗಳ ಸಂಖ್ಯೆ ಎಷ್ಟು (ಜಿಲ್ಲಾವಾರು ಪ್ರತ್ಯೇಕ ಮಾಹಿತಿ ನೀಡುವುದು) ;

(ಆ) ಜಿಲ್ಲಾ ಮಟ್ಟದ ಆಯುಷ್ ಆಸ್ಪತ್ರೆಗಳಲ್ಲಿ ವೈದ್ಯರು ಮತ್ತು ಸಿಬ್ಬಂದಿ ಕೊರತೆ ಇದೆಯೇ ; ಇದ್ದರೆ, ನೇಮಕಾತಿಗೆ ಕೈಗೊಂಡ ಕ್ರಮಗಳೇನು (ವಿವರವನ್ನು ಒದಗಿಸುವುದು) ;

(ಇ) ಆಯುಷ್ ಇಲಾಖೆಯು ತನ್ನ ವೈದ್ಯ ಪದ್ಧತಿಯನ್ನು ಪ್ರಚುರಪಡಿಸುವಲ್ಲಿ ಇದುವರೆವಿಗೂ ಕೈಗೊಂಡ ಕಾರ್ಯಕ್ರಮಗಳೇನು (ಮಾಹಿತಿ ಒದಗಿಸುವುದು) ;

(ಈ) ಆಯುಷ್ ವೈದ್ಯ ಪದ್ಧತಿಯನ್ನು ಅಳವಡಿಸಿಕೊಂಡ ರೋಗಿಗಳ ಅಂದಾಜು ಸರ್ಕಾರಕ್ಕೆ ಇದೆಯೇ (ಇದ್ದಲ್ಲಿ, ಮಾಹಿತಿ ನೀಡುವುದು) ?

ವಿ. ಶ್ರೀಶ್
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-59/ಕಾ.ಸೂ. 03376/1000 ಪ್ರತಿಗಳು/10-07-2014